ಕಾಗಿನಾ ನದಿಗೆ ಅಡ್ಡಲಾಗಿ ಜಟ್ಟೂರು ಬಳಿ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಾಣದ ಕಾಮಗಾರಿಗೆ ಈಗ ವಿವರವಾದ ಅಂದಾಜು ತಯಾರಿಸಿದೆ. ಈ ಅಂದಾಜಿಗೆ ಶೀಘ್ರದಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಿ ಕೃಷ್ಣ ಭಾಗ್ಯ ಜಲ ನಿಗಮ ನಿಯಮಿತ ವತಿಯಿಂದ ಕೈಗೆತ್ತಿಕೊಳ್ಳಲಾಗುವುದು.

ಬಳ್ಳಾರಿ ನಾಲೆಯ ಅಭಿವೃದ್ಧಿ

2(140)

ಶ್ರೀ ಅಭಯ್ ಪಾಟೀಲ್ (ಬೆಳಗಾಂ ದಕ್ಷಿಣ)

ಪ್ರಶ್ನೆಗಳು

ಅ) ಬೆಳಗಾವಿ ನಗರದ ಪರಿಮಿತಿಯಲ್ಲಿ ಹರಿಯುವ ಬಳ್ಳಾರಿ ನಾಲೆಯ ಬದಿಗಳಿಗೆ ಸಿಮೆಂಟ್ ಕಾಂಕ್ರೀಟ್ ಹೊದಿಕೆ ಒದಗಿಸುವ/ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಳ್ಳುವ ಪ್ರಸ್ತಾವನೆಯಿದೆಯೇ?

ಆ) ಹಾಗಿದ್ದಲ್ಲಿ, ಕಾಮಗಾರಿಯನ್ನು ಯಾವಾಗ ಆರಂಭಿಸಲಾಗುವುದು; ಅದಕ್ಕಾಗಿ ತಗಲುವ ಅಂದಾಜು ಮೊತ್ತವೆಷ್ಟು?

ಬಸವರಾಜ ಬೊಮ್ಮಾಯಿ (ಜಲ ಸಂಪನ್ಮೂಲ ಸಚಿವರು)

ಉತ್ತರಗಳು

ಅ)ಬೆಳಗಾವಿ ನಗರದ ಪರಿಮಿತಿಯಲ್ಲಿ ಹರಿದಿರುವ ಬಳ್ಳಾರಿ ನಾಲೆಯ ಬದಿಗಳಿಗೆ ಸಿಮೆಂಟ್ ಕಾಂಕ್ರಿಟ್ ಹೊದಿಕೆ ಒದಗಿಸುವ ಮತ್ತು ಅಭಿವೃದ್ಧಿ ಕಾಮಗಾರಿಯನ್ನು ಕೈಗೊಳ್ಳುವ ಉದ್ದೇಶವು ಸರಕಾರದ ಮುಂದಿದೆ.

ಆ) ಸದರಿ ಕಾಮಗಾರಿಯ ಅಂದಾಜು ಮೊತ್ತ ರೂ.51.60 ಕೋಟಿಗಳಾಗುತ್ತದೆ. ಸದರಿ ಕಾಮಗಾರಿಯನ್ನು ಕೇಂದ್ರ ಸರ್ಕಾರದ ಪ್ರವಾಹ ನಿರ್ವಹಣಾ ಕಾರ್ಯಕ್ರಮದಡಿ ಕೈಗೊಳ್ಳುವ ಬಗ್ಗೆ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

ಅರಣ್ಯ ಪ್ರದೇಶದ ವಿಸ್ತೀರ್ಣ

3(366)

ಶ್ರೀ ಅಮರೇಶ್ (ಮುಳಬಾಗಿಲು)

ಪ್ರಶ್ನೆ

ಅ) ಮುಳಬಾಗಿಲು ವಿಧಾನಸಭಾ ಕ್ಷೇತ್ರಕ್ಕೊಳಪಟ್ಟಿರುವ ಅರಣ್ಯ ಪ್ರದೇಶದ ವಿಸ್ತೀರ್ಣವೆಷ್ಟು;

ಆ) ಈ ಪೈಕಿ ಎಷ್ಟು ಹೆಕ್ಟೇರ್ ಪ್ರದೇಶವನ್ನು ಒತ್ತುವರಿ ಮಾಡಲಾಗಿದೆ; ಒತ್ತುವರಿ ಮಾಡಿಕೊಂಡಿರುವ ರೈತರುಗಳಿಗೆ ಸರ್ಕಾರ ವಿಧಿಸಿರುವ ದಂಡವೆಷ್ಟು;

ಇ) ಸದರಿ ಒತ್ತುವರಿ ಭೂಮಿಯಲ್ಲಿ ಜೀವನ ನಡೆಸುತ್ತಿರುವ ಬಡ ರೈತ ಕುಟುಂಬಗಳಿಗೆ ಸರ್ಕಾರ ಪರ್ಯಾಯ ವ್ಯವಸ್ಥೆ ಮಾಡುವುದೆ?

ಶ್ರೀ ಸಿ.ಪಿ.ಯೋಗೇಶ್ವರ್ (ಅರಣ್ಯ ಸಚಿವರು)

ಉತ್ತರ

ಅ) ಮುಳಬಾಗಿಲು ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿನ ಅಧಿಸೂಚಿತ ಅರಣ್ಯ ಪ್ರದೇಶದ ಒಟ್ಟು ವಿಸ್ತೀರ್ಣ 5723.42 ಹೆಕ್ಟೇರ್ ಆಗಿರುತ್ತದೆ

ಆ) ಮುಳಬಾಗಿಲು ವಿಧಾನಸಭಾ ಕ್ಷೇತ್ರದಲ್ಲಿ ಅರಣ್ಯ ಒತ್ತುವರಿಗೆ ಸಂಬಂಧಿಸಿದಂತೆ ಈ ಕೆಳಕಂಡಂತೆ ಪ್ರಕರಣಗಳು ದಾಖಲಾಗಿರುತ್ತದೆ.